8

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸಲೀಂ ಅಹ್ಮದ್ ರವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.**

ವಿಷಯ: ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಹೊಸದಾಗಿ ಆರಂಭವಾಗಿರುವ ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಹಿಮ್ಸ್) ಕಾಲೇಜಿಗೆ ಹೊಸದಾಗಿ 150 ವೈದ್ಯಕೀಯ ವಿದ್ಯಾರ್ಥಿಗಳಿಗೆ ಪ್ರವೇಶಾತವು ದೊರಕಿದ್ದ ಸಲುವಾಗಿ ವೈದ್ಯರಾಗಬೇಕೆಂಬ ಕನಸನ್ನು ಹೊತ್ತು ವ್ಯಾಸಂಗಕ್ಕಾಗಿ ಈ ಕಾಲೇಜಿನಲ್ಲಿ ಪ್ರವೇಶವನ್ನು ಪಡೆದಿರುತ್ತಾರೆ. ಆದರೆ, ತಿಂಗಳುಗಳು ಕಳೆದಿದ್ದರೂ ಸಹ ಪಾಠಗಳು ಆರಂಭವಾಗದೇ ಇರುವುದರಿಂದ ವಿದ್ಯಾರ್ಥಿಗಳು ಆತಂಕದಲ್ಲಿ ಮುಳುಗಿದ್ದಾರೆ. ಪ್ರಸ್ತುತ ಈ ಸರ್ಕಾರಿ ಮೆಡಿಕಲ್ ಕಾಲೇಜಿನಲ್ಲಿ ಡೀನ್ ಮತ್ತು ಪ್ರಾಧ್ಯಾಪಕರು ಸೇರಿದಂತೆ ಕೇವಲ ಇಬ್ಬರು ಮಾತ್ರ ಕರ್ತವ್ಯ ನಿರ್ವಹಿಸುತ್ತಿರುವುದು ಮಾಧ್ಯಮಗಳಿಂದ ತಿಳಿದುಬಂದಿರುವುದು ಅತ್ಯಂತ ಶೋಚನೀಯ ಸಂಗತಿಯಾಗಿದೆ.

ಈ ಕಾಲೇಜಿಗೆ ಹೊಸದಾಗಿ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಾಧ್ಯಾಪಕರು ಸೇರಿದಂತೆ ಒಟ್ಟು 79 ಮಂದಿಯನು ಖಾಯಂ ನೇಮಕಾತಿಯನ್ನು ಮಾಡಲು 2022 ರ ಜನವರಿಯಲ್ಲಿ ಸಂದರ್ಶನವನು ನಡೆಸಿ, ಡಿಸೆಂಬರ್, 2022 ರಂದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಹ ಬಿಡುಗಡೆಗೊಳಿಸಿ ಪ್ರಕಟಿಸಲಾಗಿರುತ್ತದೆ ಆಕ್ಷೇಪಣೆ ಅವಧಿ ಮುಗಿದು, ಒಂದುವರೆ ತಿಂಗಳು ಕಳೆದರೂ ಅಂತಿಮ ಆಯ್ಕೆ ಪಟ್ಟಿಯನು ಬಿಡುಗಡೆಗೊಳಿಸಿಲ್ಲವಾದ್ದರಿಂದ ಯಾವುದೇ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಈ ಕಾಲೇಜಿನಲ್ಲಿ ಕೆಲಸವನ್ನು ನಿರ್ವಹಿಸುತ್ತಿಲ್ಲ. ಈ ಕಾರಣದಿಂದ ಪ್ರಸ್ತುತ ಹೊಸದಾಗಿ ಪ್ರವೇಶ ಪಡೆದ ವೈದ್ಯಕೀಯ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಕರಿನೆರಳು ಬೀಳುವ ಸಂಭವವಿರುವುದರಿಂದ ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವ ಬಗ್ಗೆ ಪ್ರಸ್ತಾಪಿಸಿರುತ್ತಾರೆ.

**ಉತ್ತರ:**

ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಹುದ್ದೆಗಳನು ಭರ್ತಿ ಮಾಡುವ ಸಂಬಂಧ ನೇರ ಸಂದರ್ಶನ ಪ್ರಕ್ರಿಯೆ ಮುಕ್ತಾಯಗೊಂಡಿದ್ದು, ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಧ್ಯಾಪಕರುಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನು ಪ್ರಕಟಿಸಲು ಹಾಗೂ ಸಿನಿಯರ್ ರೆಸಿಡೆಂಟ್ ಮತು ಟ್ಯೂಟರ್ ಹುದ್ದೆಗಳನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಸರ್ಕಾರದ ಅನುಮತಿಯನು ನೀಡಲಾಗಿದೆ. ಅದರಂತೆ ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಧ್ಯಾಪಕರುಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸ್ವೀಕೃತವಾಗಿರುವ ಆಕ್ಷೇಪಣೆಗಳಿಗೆ ಸೂಕ್ತ ಹಿಂಬರಹದೊಂದಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಸಿದ್ಧತೆ ನಡೆದಿರುತ್ತದೆ.

ಇದಲ್ಲದೇ ಮುಖ್ಯ ಆಡಳಿತಾಧಿಕಾರಿಗಳು, ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ ಇವರನು ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸುಗಮ ಆಡಳಿತ ನಿರ್ವಹಣೆಗಾಗಿ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಹುದ್ದೆಯ ಅಧಿಕ ಪ್ರಭಾರದಲ್ಲಿರಿಸಿ ಆದೇಶ ಹೊರಡಿಸಲಾಗಿರುತ್ತದೆ.

ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯು 2022-23 ನೇ ಸಾಲಿನಿಂದ ಹೊಸದಾಗಿ ಪ್ರಾರಂಭವಾಗುತಿರುವ ಸಂಸ್ಥೆಯಾಗಿರುವುದರಿಂದ ಸಂಸ್ಥೆಯ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾವೇರಿ ಜಿಲ್ಲೆಗೆ ಹತ್ತಿರವಿರುವ ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹುಬ್ಬಳ್ಳಿ ಮತ್ತು ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ ಈ ಸಂಸ್ಥೆಗಳಿಂದ ಬೋಧಕ ಸಿಬ್ಬಂದಿಗಳನ್ನು ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ನಿಯೋಜಿಸಲು ಕ್ರಮ ವಹಿಸಲಾಗುತ್ತಿದೆ.

ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ರಾಷ್ಟ್ರೀಯ ವೈದ್ಯಕೀಯ ಮಂಡಳಿ ಅವಶ್ಯಕತೆಗನುಗುಣವಾಗಿ ಸಂಸ್ಥೆಗೆ ಅವಶ್ಯವಿರುವ ಒಟ್ಟು 1541 ಬೋಧಕೇತರ ಹುದ್ದೆಗಳನು ಸೃಜಿಸುವಂತೆ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. ಸಂಸ್ಥೆಯನ್ನು ಶೀಘ್ರವಾಗಿ ಪರಿಪೂರ್ಣವಾಗಿ ನಡೆಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು.

ಸಂಖ್ಯೆ: ಎಂಇಡಿ 132 ಎಂಎಂಸಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು